ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಸಹಾಯಧನ ನೀಡುವ ಕಾರ್ಯಕ್ರಮ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

525(815) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಕಾರಣಕರ್ತರಾದ ಕರ್ನಾಟಕ ಏಕೀಕರಣ ಧುರೀಣರಾದ ದಿವಂಗತ ಎಸ್.ಆರ್. ಕಂಠಿಯವರ ಹೆಸರನ್ನು ಬೆಂಗಳೂರು ವಿಶ್ವವಿದ್ಯಾನಿಲಯಕ್ಕೆ ನಾಮಕರಣ ಮಾಡಲು ಸರ್ಕಾರವು ಯೋಚಿಸಿದೆಯೇ;

ಆ) ಬೆಂಗಳೂರು ವಿಶ್ವವಿದ್ಯಾನಿಲಯದ ಸಮಗ್ರ ಬೆಳವಣಿಗೆಗೆ ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಭವಿಷ್ಯದ ಶೈಕ್ಷಣಿಕ ಮತ್ತು ಸಂಶೋಧನಾ ಅಭಿವೃದ್ಧಿಗಾಗಿ ಬೆಂಗಳೂರು ವಿಶ್ವವಿದ್ಯಾಲಯ ಈ ಕೆಳಕಂಡ ಪ್ರಮುಖವಾದ ಯೋಜನೆಗಳನ್ನು ಹಮ್ಮಿಕೊಂಡಿದೆ:–

1) ಹೊಸ ಶೈಕ್ಷಣಿಕ ಕೋರ್ಸುಗಳನ್ನು ಈಗಿನ ಪರಿಸ್ಥಿತಿಗೆ ಅನುಗುಣವಾಗಿ ಉದ್ದೇಶ ಪೂರಿತ ಚಟುವಟಿಕೆಗಳನ್ನು ಜೈವಿಕವಿಜ್ಞಾನ, ಸೂಕ್ಷ್ಮ ವಿಜ್ಞಾನವನ್ನು ಹಾಗೂ ಮಾಹಿತಿ ತಂತ್ರಜ್ಞಾನ ಇವುಗಳಲ್ಲಿ ಉನ್ನತ ವ್ಯಾಸಂಗವನ್ನು ಮುಂದುವರಿಸಲು ಆ ವಿಭಾಗಗಳಲ್ಲಿ ಕೇಂದ್ರಗಳನ್ನು ಸ್ಥಾಪಿಸುವುದು.

2) ಜೈವಿಕ ವಿಜ್ಞಾನ ಹಾಗೂ ಭೌತಶಾಸ್ತ್ರ ಇವುಗಳಲ್ಲಿ ರಾಷ್ಟ್ರೀಯ ಮಟ್ಟದ ಸಂಶೋಧನ ಕೇಂದ್ರಗಳನ್ನು ಸ್ಥಾಪಿಸುವುದು.

3) ಇಂಟಿಗ್ರೇಟೆಡ್ ಬಿಎಸ್ಸಿ., ನಾಲ್ಕು ವರ್ಷದ ಬಿಎಸ್ಸಿ., ಹಾನರ್ಸ್ ಹಾಗೂ ಎಂ.ಎಸ್ಸಿ., ಹೊಸ ಕೋರ್ಸುಗಳನ್ನು ಸೆಂಟ್ರಲ್ ಕಾಲೇಜಿನಲ್ಲಿ ಪುನರ್ ಪ್ರಾರಂಭಿಸುವುದು.

4) ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಕ್ಯಾಂಪಸ್‌ನಲ್ಲಿ ವಿವಿದೋದ್ದೇಶ ವನಗಳನ್ನು ಶೈಕ್ಷಣಿಕ ಸಂಶೋಧನೆ ಹಾಗೂ ಉನ್ನತ ಅಧ್ಯಯನಕ್ಕೆ ಬೇಕಾಗುವ ವಿವಿಧ ಜಾತಿ ಸಸ್ಯಗಳು ಹಾಗೂ ವೈದ್ಯಕೀಯ ಗಿಡಗಳನ್ನು ಸಂರಕ್ಷಿಸುವ ಕಾರ್ಯವಿಧಾನಗಳ ಕೇಂದ್ರ ಸ್ಥಾಪನೆ ಮಾಡುವುದು.

5) ವಿದೇಶಗಳ ಶೈಕ್ಷಣಿಕ ಹಾಗೂ ಸಂಶೋಧನ (ಆರ್ ಅಂಡ್ ಡಿ) ವಿಭಾಗಗಳೊಂದಿಗೆ ಎಂಒಯು (ಒಡಂಬಡಿಕೆ) ಮಾಡಿಕೊಳ್ಳುವುದು.

526(807) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ನಗರದಲ್ಲಿ ಮಾವಿನ ಹಣ್ಣಿನ, ಸಗಟು ಮಾರಾಟವನ್ನು ಯಾವ ಸ್ಥಳದಲ್ಲಿ ನಡೆಸಲಾಗುತ್ತಿದೆ;

ಆ) ಸದರಿ ಸ್ಥಳದಲ್ಲಿ ನಡೆಸಲು ಸಗಟು ಮಾರಾಟಗಾರರು ನ್ಯಾಯಾಲಯದ ಮೊರೆ ಹೋಗಿರುವುದರ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

ಇ) ಪ್ರಸ್ತುತ ನಿರ್ಧಾರದಿಂದ ಸಗಟು ಮಾರಾಟಗಾರರು ವ್ಯಾಪಾರದ ವಹಿವಾಟಿಗಾಗಿ ನೆರೆ ರಾಜ್ಯಕ್ಕೆ ವಲಸೆ ಹೊಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ) ಪ್ರಸ್ತುತ ಮಾವಿನ ಹಣ್ಣಿನ ಸಗಟು ಮಾರಾಟ ಹಣ್ಣು ಮತ್ತು ತರಕಾರಿ (ವಿಶೇಷ) ಕೃ.ಉ.ಮಾ.ಸ., ಬೆಂಗಳೂರು ಇದರ ಸಿಂಗೇನ ಅಗ್ರಹಾರ ಉಪ ಮಾರುಕಟ್ಟೆಯಲ್ಲಿ ನಡೆಯುತ್ತಿದೆ.

ಆ),ಇ) ಹೌದು. ಈ ವಿಷಯವನ್ನು ಎಚ್ಚರಿಕೆಯಿಂದ ಪರಿಶೀಲಿಸಲಾಗುತ್ತಿದೆ.

ಈ) ಸಿಂಗೇನ ಅಗ್ರಹಾರ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಎಲ್ಲಾ ಹಣ್ಣಿನ ವಹಿವಾಟಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಅಭಿವೃದ್ಧಿಪಡಿಸಿದೆ.

ಮುಂದಿನ ಹಂಗಾಮಿನಲ್ಲಿ ಸಿಂಗೇನ ಅಗ್ರಹಾರ ಉಪ ಮಾರುಕಟ್ಟೆಗಳಿಗೆ ಮಾವಿನ ಹಣ್ಣಿನ ಸಗಟು ವ್ಯಾಪಾರವನ್ನು ನಡೆಸಲು ಎಲ್ಲಾ ಪೂರಕ ಕ್ರಮಗಳನ್ನು ಜರುಗಿಸಲಾಗುವುದು.

527(809) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಚಾಮರಾಜನಗರದ ಬೆಲ್ಲದ ಮಾರುಕಟ್ಟೆಯಲ್ಲಿ ರೈತರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಬೆಲ್ಲದ ವಿತರಣೆಯಾಗಲು ಕೈಗೊಂಡಿರುವ ಕ್ರಮಗಳೇನು;

ಆ) ಮಾರುಕಟ್ಟೆಯಲ್ಲಿ ಬೆಲ್ಲದ ಬೆಲೆ ಕುಸಿದಾಗ ಅದನ್ನು ಸುರಕ್ಷಿತವಾಗಿಟ್ಟು ಉತ್ತಮ ಬೆಲೆ ಸಿಗುವವರೆಗೆ ಕೆಡದ ಹಾಗೆ ಮಾರುಕಟ್ಟೆಯಲ್ಲಿ ಶೇಖರಿಸಲು ಸರ್ಕಾರವು ಯಾವುದಾದರೂ ಮಂಜಾಗರೂಕತೆ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆಯೆ; (ವಿವರಗಳನ್ನು ನೀಡುವುದು)?

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ) ಬೆಲ್ಲದ ಮಾರಾಟ ಮಾಡುವ ರೈತರಿಗೆ ತೊಂದರೆಯಾಗದಂತೆ ಚಾಮರಾಜನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

1) ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಗೋದಾಮು/ಸಣ್ಣ ಮಳಿಗೆಗಳು ಹಾಗೂ ಇತರ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬೆಲ್ಲದ ಮಾರಾಟಕ್ಕಾಗಿ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ.

2) ಕರಾರುವಾಕ್ಕದ ತೂಕವನ್ನು ನೀಡಲು ಎಲೆಕ್ಟ್ರಾನಿಕ್ ತೂಕದ ಯಂತ್ರಗಳನ್ನು ಅಳವಡಿಸಲಾಗುತ್ತಿದೆ.

3) ರೈತರ ತಮ್ಮ ಹುಟ್ಟುವಳಿಗಳನ್ನು ಮಾರಾಟಕ್ಕೆ ತಂದ ಸಂದರ್ಭದಲ್ಲಿ ಬೆಲೆಯಲ್ಲಿ ಏರುಪೇರು ಉಂಟಾದಲ್ಲಿ ರೈತರ ಹುಟ್ಟುವಳಿಯನ್ನು ಅಡವಿಟ್ಟು, ಬೆಲ್ಲದ ಮೌಲ್ಯದ ಶೇ.60ರಷ್ಟು ಅಥವಾ ರೂ. 10000-00 ಯಾವುದೋ ಹೆಚ್ಚೋ ಅದನ್ನು ರೈತರಿಗೆ ಪಾವತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

4) ಚಾಮರಾಜನಗರದ ಬೆಲ್ಲ ಉತ್ತಮ ಗುಣಮಟ್ಟದ್ದಾಗಿರುವ ಹಿನ್ನಲೆಯಲ್ಲಿ ಹಾಗೂ ಸದರಿ ಬೆಲ್ಲದಲ್ಲಿ ಹೈಡ್ರೋಸನ್ ಪ್ರಮಾಣ ಕಡಿಮೆ ಇರುವ ಹಿನ್ನಲೆಯಲ್ಲಿ ಅದನ್ನು "ಬ್ರಾಂಡ್" ಮಾಡಿ ಇತರ ಮಾರುಕಟ್ಟೆಗಳಿಗೆ ಬಿಡುಗಡೆ ಮಾಡಲು ಸೂಕ್ತವಾದ ಪ್ಯಾಕೆಜಿಂಗ್ ಹಾಗೂ ಇತರ ಕ್ರಮಗಳ ಬಗ್ಗೆ ಸಿ.ಎಫ್.ಟಿ.ಆರ್.ಐ.ನ ಜೊತೆ ಸಂಪರ್ಕ ಬೆಳೆಸಿದ್ದು, ಉತ್ಪಾದಿತ ಬೆಲ್ಲವನ್ನು ಇತರೆ ಮಾರುಕಟ್ಟೆಗಳಿಗೆ ಅಥವಾ ಕನ್ಸೂಮರ್ ಪಾಯಿಂಟ್ಸ್‌ಗಳಿಗೆ ತಲುಪಿಸಲು ಅನುಕೂಲವಾಗುವಂತೆ ರೈತ ಬೆಳೆಗಾರರ ಸಂಘಟನೆಗಳನ್ನು ರೂಪಿಸಲು ಸಹ ಮಾರುಕಟ್ಟೆ ಸಮಿತಿ ಕ್ರಮ ಕೈಗೊಂಡಿದೆ.